## 105. ರಾಜ್ಯ ಸರ್ಕಾರ ಮಹತ್ವದ ನಿರ್ಧಾರ 5ನೇ ತರಗತಿವರೆಗೆ ಆನ್‌ಲೈನ್ ಕ್ಲಾಸಿಲ್ಲ

ಬೆಂಗಳೂರು ಎಲ್.ಕೆ.ಜಿ. ಯಿಂದ ಐದನೇ ತರಗತಿವರೆಗೆ ಆನ್‌ಲೈನ್ ತರಗತಿ ರದ್ದು. 6 ರಿಂದ 10ನೇ ತರಗತಿವರೆಗೆ ಆನ್‌ಲೈನ್ ತರಗತಿ ಹೇಗೆ ನಡೆಸಬೇಕು ಎಂಬ ಬಗ್ಗೆ ತಜ್ಞರ ವರದಿ ಪಡೆದು ಸರ್ಕಾರ ಈ ಬಗ್ಗೆ ತೀರ್ಮಾನ ಕೈಗೊಳ್ಳುವವರೆಗೆ ಈ ತರಗತಿಗಳಿಗೂ ಆನ್‌ಲೈನ್ ಕ್ಲಾಸ್ ನಡೆಸುವಂತಿಲ್ಲ ಮತ್ತು ಆನ್‌ಲೈನ್ ಕ್ಲಾಸ್ ನೆಪದಲ್ಲಿ ಶುಲ್ಕ ಸಂಗ್ರಹಿಸುವಂತಿಲ್ಲ.

ಆನ್‌ಲೈನ್ ಶಿಕ್ಷಣಕ್ಕೆ ಸಂಬಂಧಿಸಿದಂತೆ ನಾಡಿನ ಹಿರಿಯ ಶಿಕ್ಷಣ ತಜ್ಞರು, ಮಾನಸಿಕ ಆರೋಗ್ಯ ವಿಭಾಗದ ಪರಿಣಿತರು, ಖಾಸಗಿ ವಿದ್ಯಾಸಂಸ್ಥೆಗಳ ಸಂಘಟನೆಗಳ ಪ್ರತಿನಿಧಿಗಳು ಸೇರಿದಂತೆ ಶೈಕ್ಷಣಿಕ ಸುಧಾರಣೆ ವಿಷಯದ ಸಂಸ್ಥೆಗಳ ಪ್ರತಿನಿಧಿಗಳೊಂದಿಗೆ ನಡೆಸಿದ ಸುದೀರ್ಘ ಸಮಾಲೋಚನೆ ನಂತರ ರಾಜ್ಯ ಸರ್ಕಾರ ಈ ನಿರ್ದೇಶನಗಳನ್ನು ಶಾಲೆಗಳಿಗೆ ನೀಡಿದೆ. ಒಂದು ವೇಳೆ ಆನ್‌ಲೈನ್ ತರಗತಿಗಳನ್ನು ನಡೆಸುತ್ತಿದ್ದರೆ ಕೂಡಲೇ ಸ್ಥಗಿತಗೊಳಿಸಬೇಕು. ಸ್ಥಗಿತಗೊಳಿಸದ ಶಾಲೆಗಳ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು ಎಂದು ಶಿಕ್ಷಣ ಸಚಿವ ಎಸ್.ಸುರೇಶ್‌ಕುಮಾರ್ ಎಚ್ಚರಿಕೆ ನೀಡಿದರು.

ಶಿಕ್ಷಣ ಸಚಿವ ಎಸ್.ಸುರೇಶ್‌ಕುಮಾರ್, ಎಲ್‌ಕೆಜಿ, ಯುಕೆಜಿ. ಮತ್ತು 1 ರಿಂದ 5ನೇ ತರಗತಿವರೆಗೆ ಮಕ್ಕಳಿಗೆ ಕಲಿಕೆ ಮಾರಕವಾಗಿದೆ. ಸಿಬಿಎಸ್‌ಇ, ಐಸಿಎಸ್‌ಇ ಮತ್ತು ರಾಜ್ಯ ಪಠ್ಯಕ್ರಮ ಸೇರಿದಂತೆ ಎಲ್ಲಾ ರೀತಿಯ ಖಾಸಗಿ ಶಿಕ್ಷಣ ಸಂಸ್ಥೆಗಳು ಪೂರ್ವ ಪ್ರಾಥಮಿಕ ಮತ್ತು ಪ್ರಾಥಮಿಕ ತರಗತಿಗಳಿಗೆ ಆನ್‌ಲೈನ್ ತರಗತಿಗಳನ್ನು ನಡೆಸಬಾರದು ಮತ್ತು ಆನ್‌ಲೈನ್ ತರಗತಿ ಹೆಸರಿನಲ್ಲಿ ಶುಲ್ಕವನ್ನು ಕೂಡ ಸಂಗ್ರಹಿಸಬಾರದು.

6 ರಿಂದ 10ನೇ ತರಗತಿಗಳಲ್ಲಿ ಆನ್‌ಲೈನ್ ತರಗತಿ ಸಾಧಕ–ಬಾಧಕ ಪರಾಮರ್ಶಿಸಲು ಹಾಗೂ ಒಂದು ವೇಳೆ ಆನ್‌ಲೈನ್ ತರಗತಿ ನಡೆಸಲೇಬೇಕಾದರೆ ಅದು ಹೇಗಿರಬೇಕು ಎಂಬ ಮಾರ್ಗಸೂಚಿ ನೀಡಲು ಹಿರಿಯ ಶಿಕ್ಷಣ ತಜ್ಞರ ಸಮಿತಿ ರಚಿಸಲಾಗಿದೆ.

ರಾಷ್ಟ್ರೀಯ ಶಿಕ್ಷಣ ನೀತಿ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಪ್ರೊ.ಎಂ.ಕೆ. ಶ್ರೀಧರ್ ನೇತೃತ್ವದ ತಂಡದಲ್ಲಿ ಹಿರಿಯ ಶಿಕ್ಷಣ ತಜ್ಞರಾದ ಪ್ರೊ. ಗುರುರಾಜ ಕರ್ಜಗಿ, ಡಾ.ವಿ.ಪಿ. ನಿರಂಜನಾರಾಧ್ಯ, ಅಜೀಂ ಪ್ರೇಮ್‌ಜಿ ಪ್ರತಿಷ್ಠಾನದ ಪ್ರತಿನಿಧಿಗಳಾದ ಹೃಷಿಕೇಶ್, ನಿಮ್ಹಾನ್ಸ್ ಸಂಸ್ಥೆಯ ಮಕ್ಕಳ ಮಾನಸಿಕ ತಜ್ಞರು, ಅರ್ಲಿಚೈಲ್ಡ್‌ಹುಡ್ ಸಂಘಟನೆಯ ಪ್ರತಿನಿಧಿಗಳು ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳು ಸಮಿತಿಯಲ್ಲಿ ಇದ್ದಾರೆ. ಸಮಿತಿಯು ಹತ್ತು ದಿನಗಳಲ್ಲಿ ವರದಿ ನೀಡಲಿದೆ. ಶಿಕ್ಷಣದಲ್ಲಿ ತಂತ್ರಜ್ಞಾನವನ್ನು ಯಾವ ರೀತಿ ಬಳಸಿಕೊಳ್ಳಬೇಕು, ರಜಾ ಅವಧಿಯಲ್ಲಿ ಮಕ್ಕಳ ಜ್ಞಾನಾರ್ಜನೆಗೆ ಪೂರಕವಾಗಿ ಹೇಗೆ ತಂತ್ರಜ್ಞಾನ ಬಳಸಿಕೊಳ್ಳಬೇಕು ನಗರ ಹಾಗೂ ಗ್ರಾಮೀಣ ಪ್ರದೇಶಗಳ ವಿದ್ಯಾರ್ಥಿ/ಪೋಷಕರ ಸಾಮಾಜಿಕ ಸ್ಥಿತಿಗಳನ್ನು ಗಮನದಲ್ಲಿಟ್ಟುಕೊಂಡು ತಂತ್ರಜ್ಞಾನ ಹೇಗೆ ಬಳಸಿಕೊಳ್ಳಬೇಕು ಎಂಬುದು ಸೇರಿದಂತೆ ಆನ್‌ಲೈನ್ ತರಗತಿಗಳು ಹೇಗಿರಬೇಕು ಎಂಬ ಮಾರ್ಗಸೂಚಿ ರೂಪಿಸುವಂತೆ ಈ ಸಮಿತಿಗೆ ಸರ್ಕಾರ ನಿರ್ದೇಶಿಸಿದೆ.

ಆಧಾರ:ಕನ್ನಡಪ್ರಭ, ದಿನಾಂಕ:11.06.2020